1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

Spl.C.145/2023

ದಿಃ 05.06.2025

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-3 Pw-3

| | | |
|---|---|---|
| ಹೆಸರು | ಃ | ಶ್ರೀಧರ ಹೆಚ್ ಕೆ |
| ತಂದೆಯ ಹೆಸರು | ಃ | ಕೃಷ್ಣಮೂರ್ತಿ |
| ವಯಸ್ಸು | ಃ | 66 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ಹೊನ್ನಾಪುರ,<br>ಮಾಗಡಿ ತಾಲ್ಲೂಕು |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ದಿಃ01.08.2023ರಂದು ನಾನು ಮಾರ್ಗದಲ್ಲಿ ಹೋಗುತ್ತಿದ್ದಾಗ ಪೊಲೀಸರು ನನ್ನನ್ನು ಕರೆದು ಪಂಚಾಕ್ಷರಿ ಅವರ ಮನೆಯ ಬಳಿ ಕರೆದುಕೊಂಡು ಹೋದರು. ಅಲ್ಲಿ ನನ್ನನ್ನು ಸಹಿ ಮಾಡಲು ಹೇಳಿ ನನ್ನ ಸಹಿ ಪಡೆದು ಫೋಟೋ ತೆಗೆದಿರುತ್ತಾರೆ. ಆಗ ಸಮಯ ಬೆಳಿಗ್ಗೆ 11.30ರಿಂದ 12.30ರ ಸಮಯವಾಗಿತ್ತು. ಸ್ಥಳಕ್ಕೆ ರಾಮಯ್ಯ ಸಹ ಬಂದಿರುತ್ತಾರೆ. ನನ್ನ ಸಹಿಯನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ನಿ.ಪಿ.4ರಲ್ಲಿರುವಂತಹ ಬರವಣಿಗೆ ಮತ್ತು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.4(ಬಿ) ಎಂದು

ಗುರುತಿಸಲಾಯಿತು. ಸ್ಥಳದಲ್ಲಿ ತೆಗೆದಂತಹ ಫೋಟೋವನ್ನೂ ಸಹ ಸಾಕ್ಷಿ ನೋಡಿ ಗುರುತಿಸಿದ್ದು, ಅದು ನಿ.ಪಿ.5 ಮತ್ತು 6 ಆಗಿರುತ್ತದೆ.

<u>ಪಾಟೀ ಸವಾಲುಃ ಶ್ರೀ. ಎಸ್.ಸಿ.ಪಿ., ವಕೀಲರಿಂದ ಆರೋಪಿಯ ಪರವಾಗಿಃ</u>

ಪೊಲೀಸರು ಮಹಜರ್‌ಗೆ ಬರುವಂತೆ ನನಗೆ ನೋಟೀಸ್ ಕೊಟ್ಟಿರುವುದಿಲ್ಲ. ಮಹಜರ್‌ನ್ನು ಯಾರು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿ ಸ್ಥಳವನ್ನು ಯಾರು ತೋರಿಸಿದರೂ ಎಂದೂ ಸಹ ನನಗೆ ಗೊತ್ತಿಲ್ಲ. ನಿ.ಪಿ.4 ರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನನ್ನು ಕರೆದು ಸಹಿ ಮಾಡಲು ಹೇಳಿದ್ದ ಕಾರಣ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿ. ನನ್ನ ಜೊತೆ ಮಹಜರ್ ಗೆ ಬೇರೆ ಯಾರೂ ಸಹಿ ಮಾಡಿರುವುದಿಲ್ಲ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಎಂ.ಪಂಚಾಕ್ಷರಿ)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.